## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿನೂತನ ಮಾದರಿ ನೂತನ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಇಡಿ/81/ಯುಎನ್‌ಇ/2022, ದಿನಾಂಕ: 18-03-2022
2) ಸರ್ಕಾರದ ಆದೇಶ ಸಂಖ್ಯೆ: ಇಡಿ/81/ಯುಎನ್‌ಇ/2022, ದಿನಾಂಕ: 18-04-2022
3) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ/ 19/ ಶಾಸನ/ 2022, ದಿನಾಂಕ: 10-10-2022

**ಪ್ರಸ್ತಾವನೆ:**

2022-23 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿನ ಕಂಡಿಕೆ 103 ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ:

"ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿದೆ. ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ತಲಾ 02 ಕೋಟಿ ರೂ.ಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿವೆ."

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 18-03-2022ರ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ, ಸ್ಥಾಪಿಸುವ ಸಂಬಂಧ ಪ್ರೊ. ಜಿ. ಹೇಮಂತ ಕುಮಾರ್, ಕುಲಪತಿಗಳು, ಮೈಸೂರು ವಿಶ್ವವಿದ್ಯಾಲಯ, ಇವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ: 18-04-2022ರ ಆದೇಶದಲ್ಲಿ ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ವಿನೂತನ ಮಾದರಿಯ 7 ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ:

1. ಈ ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಯಾವುದೇ ಜಮೀನನ್ನಾಗಲೀ, ವಾಹನವನ್ನಾಗಲೀ ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ. ಈಗಾಗಲೇ ಮಾತೃ ವಿಶ್ವವಿದ್ಯಾಲಯಗಳಿಗೆ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯ ಹುದ್ದೆಗಳನ್ನು ಬಳಸಿಕೊಂಡು ಸ್ಥಾಪಿಸುವುದು. ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ.

2. 07 ಹಿಂದುಳಿದ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ Digital ಹಾಗೂ Entrepreneurial (ಕೌಶಲ್ಯಾಧಾರಿತ) "Earn while you learn" ಮಾದರಿಯಂತೆ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಕ್ರಮವಹಿಸುವುದು.

....2

Scanned with CamScanner

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ ದಿನಾಂಕ: 10-10-2022ರ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ಕ್ಕೆ ಮತ್ತಷ್ಟು ತಿದ್ದುಪಡಿ ಮಾಡುವುದರ ಮೂಲಕ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2022 ರಲ್ಲಿ ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಮತ್ತು ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವಾಗಿರುವ ಮಂಡ್ಯ ವಿಶ್ವವಿದ್ಯಾಲಯವನ್ನು ಸಂಯೋಜಿತ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸಲು ಅಧಿಸೂಚಿಸಲಾಗಿದೆ. ಈ 08 ವಿಶ್ವವಿದ್ಯಾಲಯಗಳ ಸ್ಥಾಪನೆಯು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಜಾರಿಗೆ ಬಂದಿರುತ್ತದೆ.

ಆದ್ದರಿಂದ, ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ, ಮತ್ತು ಪ್ರಸ್ತುತ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವಾಗಿರುವ ಮಂಡ್ಯ ವಿಶ್ವವಿದ್ಯಾಲಯವನ್ನು ಸಂಯೋಜಿತ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸುವ ಸಂಬಂಧ ಆರ್ಥಿಕ, ಭೌತಿಕ ಹಾಗೂ ಮಾನವ ಸಂಪನ್ಮೂಲಗಳ ಕುರಿತಂತೆ ಕ್ರಮವಹಿಸಬೇಕಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 81 ಯುಎನ್ಇ 2022, ಬೆಂಗಳೂರು, ದಿನಾಂಕ: 05/11/2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪನೆಗೊಂಡಿರುವ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ, ಮತ್ತು ಪ್ರಸ್ತುತ ಏಕಾತ್ಮಕ ಸ್ವರೂಪದ ವಿಶ್ವವಿದ್ಯಾಲಯವಾಗಿರುವ ಮಂಡ್ಯ ವಿಶ್ವವಿದ್ಯಾಲಯವನ್ನು ಸಂಯೋಜಿತ ವಿಶ್ವವಿದ್ಯಾಲಯವನ್ನಾಗಿ ಪರಿವರ್ತಿಸುವ ಸಂಬಂಧ ಆರ್ಥಿಕ, ಭೌತಿಕ ಹಾಗೂ ಮಾನವ ಸಂಪನ್ಮೂಲಗಳ ಕುರಿತಂತೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಆದೇಶಿಸಿದೆ:-

| ಕ್ರ. ಸಂ. | ಮೂಲ ವಿಶ್ವವಿದ್ಯಾಲಯದ ಹೆಸರು | ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಲಾಗಿರುವ ವಿಶ್ವ ವಿದ್ಯಾಲಯದ ಹೆಸರು | ನೂತನ ವಿಶ್ವವಿದ್ಯಾಲಯದ ಕೇಂದ್ರ ಸ್ಥಳ |
|---|---|---|---|
| 1 | ಮೈಸೂರು ವಿಶ್ವವಿದ್ಯಾಲಯ | ಚಾಮರಾಜ ನಗರ | ಡಾ: ಬಿ.ಆರ್. ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಚಾಮರಾಜನಗರ |
| | | ಹಾಸನ | ಸ್ನಾತಕೋತ್ತರ ಕೇಂದ್ರ, ಹೇಮ ಗಂಗೋತ್ರಿ, ಹಾಸನ |
| | | ಮಂಡ್ಯ | ಸರ್ ಎಂ. ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರ, ಮಂಡ್ಯ |
| 2 | ಗುಲ್ಬರ್ಗ ವಿಶ್ವವಿದ್ಯಾಲಯ | ಬೀದರ್ | ಜ್ಞಾನ ಕಾರಂಜಿ, ಹಾಲಹಳ್ಳಿ, ಭಾಲ್ಕಿ ತಾ: ಬೀದರ್ ಜಿಲ್ಲೆ |
| 3 | ಮಂಗಳೂರು ವಿಶ್ವವಿದ್ಯಾಲಯ | ಕೊಡಗು | ಚಿಕ್ಕಅಲುವಾರ, ಕುಶಾಲನಗರ |
| 4 | ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯ | ಕೊಪ್ಪಳ | 4ನೇ ಮಹಡಿ, ಸರ್ಕಾರಿ ತಾಂತ್ರಿಕ ಮಹಾ ವಿದ್ಯಾಲಯ, ತಳಕಲ್ ಕೊಪ್ಪಳ |
| 5 | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ | ಬಾಗಲಕೋಟೆ | ಜಮಖಂಡಿ, ಬಾಗಲಕೋಟೆ ಜಿಲ್ಲೆ |
| 6 | ಕರ್ನಾಟಕ ವಿಶ್ವವಿದ್ಯಾಲಯ | ಹಾವೇರಿ | ಕೆರಿಮತ್ತಿಹಳ್ಳಿ, ಹಾವೇರಿ |

.....3

Scanned with CamScanner

**ಷರತ್ತುಗಳು:**

1. ನೂತನ 07 ವಿಶ್ವವಿದ್ಯಾಲಯಗಳು ಪ್ರಸ್ತುತ ಇರುವ ಸ್ನಾತಕೋತ್ತರ ಕೇಂದ್ರಗಳಲ್ಲಿಯೇ ಕಾರ್ಯನಿರ್ವಹಿಸತಕ್ಕದ್ದು.
2. ನೂತನ 07 ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಯಾವುದೇ ಜಮೀನನ್ನು ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ.
3. ಈಗಾಗಲೇ ಮಾತೃ ವಿಶ್ವವಿದ್ಯಾಲಯಗಳಿಗೆ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯ ಹುದ್ದೆಗಳನ್ನು ಈ 07 ನೂತನ ವಿಶ್ವವಿದ್ಯಾಲಯಗಳಿಗೆ ಬಳಸಿಕೊಳ್ಳುವುದು ಹಾಗೂ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ. ಈ ಉದ್ದೇಶಕ್ಕಾಗಿ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತಿಲ್ಲ.
4. ನೂತನ ವಿಶ್ವವಿದ್ಯಾಲಯಗಳು ಮತ್ತು ಸಂಬಂಧಪಟ್ಟ ಮಾತೃ ವಿಶ್ವವಿದ್ಯಾಲಯಗಳಿಗೆ ಹಂಚಿಕೆಯಾಗಿರುವ ಪ್ರಾದೇಶಿಕ ಅಧಿಕಾರ ವ್ಯಾಪ್ತಿ ಮತ್ತು ಈ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೆ ಒಳಪಡುವ ಸಂಯೋಜಿತ ಕಾಲೇಜುಗಳ ಆಧಾರದ ಮೇಲೆ ಬೋಧಕ / ಬೋಧಕೇತರ ಹುದ್ದೆಗಳನ್ನು ನಿರ್ದಿಷ್ಟ ಅನುಪಾತದೊಂದಿಗೆ ಮರು ಹಂಚಿಕೆ ಮಾಡಲು ಸಂಬಂಧಪಟ್ಟಂತೆ ಆಯಾ ಮಾತೃ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ) ಇವರು ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರಕ್ಕೆ ಅಗತ್ಯ ಪ್ರಸ್ತಾವನೆ ಸಲ್ಲಿಸತಕ್ಕದ್ದು.
5. ಕ್ರಮ ಸಂಖ್ಯೆ: 4 ರಂತೆ ಕ್ರಮವಹಿಸುವವರೆಗೆ ಪ್ರಸ್ತುತ ನೂತನ ವಿಶ್ವವಿದ್ಯಾಲಯಗಳ ಕೇಂದ್ರ ಸ್ಥಾನವಾಗಿ ಪರಿವರ್ತನೆಗೊಂಡಿರುವ ಸ್ನಾತಕೋತ್ತರ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳು ಆಯಾ ಸ್ನಾತಕೋತ್ತರ ಕೇಂದ್ರಗಳಲ್ಲಿಯೇ ಕರ್ತವ್ಯ ನಿರ್ವಹಿಸತಕ್ಕದ್ದು.
6. 07 ಶೈಕ್ಷಣಿಕ ಹಿಂದುಳಿದ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ Digital ಹಾಗೂ Entrepreneurial (ಕೌಶಲ್ಯಾಧಾರಿತ) "Earn while you learn" ಮಾದರಿಯಂತೆ ವಿಶ್ವವಿದ್ಯಾಲಯಗಳು ಕ್ರಮವಹಿಸುವುದು.
7. ಪ್ರಸ್ತುತ ಶೈಕ್ಷಣಿಕ ವರ್ಷ ಪೂರ್ಣಗೊಳ್ಳುವವರೆಗೆ ನೂತನ ವಿಶ್ವವಿದ್ಯಾಲಯಗಳಡಿ ಬರುವ ಸಂಯೋಜಿತ ಕಾಲೇಜುಗಳಲ್ಲಿ ನಡೆಯುವ ಶೈಕ್ಷಣಿಕ ಚಟುವಟಿಗಳನ್ನು ಮಾತೃ ವಿಶ್ವವಿದ್ಯಾಲಯಗಳೇ ಪೂರ್ಣಗೊಳಿಸತಕ್ಕದ್ದು. ಇದರ ಬಗ್ಗೆ ಸಂಬಂಧಪಟ್ಟ ಆಯಾ ಮಾತೃ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ) ಮತ್ತು ಕುಲಸಚಿವರು(ಪರೀಕ್ಷಾಂಗ) ಇವರುಗಳು ನಿಯಮಾನುಸಾರ ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆದು ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಅನಾನುಕೂಲವಾಗದಂತೆ ಕ್ರಮವಹಿಸತಕ್ಕದು.
8. 2023-24 ನೇ ಸಾಲಿನಿಂದ ಸಂಗ್ರಹಿಸಲಾಗುವ ಸಂಯೋಜನಾ, ಪರೀಕ್ಷಾ, ಇತರೆ ಶುಲ್ಕವನ್ನು ಆಯಾ ನೂತನ ವಿಶ್ವವಿದ್ಯಾಲಯಗಳು ವಿಶ್ವವಿದ್ಯಾಲಯಗಳ ನಿಯಮಬದ್ಧ ನಿರ್ವಹಣೆಗಾಗಿ ನಿಯಮಗಳಂತೆ ಬಳಸಿಕೊಳ್ಳತಕ್ಕದ್ದು.
9. ನೂತನವಾಗಿ ಸ್ಥಾಪಿಸಲ್ಪಟ್ಟಿರುವ ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ UUCMS ತಂತ್ರಾಂಶವನ್ನು ಅಳವಡಿಸಿಕೊಂಡು ತನ್ನ ಎಲ್ಲ ಕಾರ್ಯಚಟುವಟಿಕೆಗಳನ್ನು ನಡೆಸುವುದು ಹಾಗು ಕಾರ್ಯನಿರ್ವಹಿಸತಕ್ಕದ್ದು.
10. ನೂತನ ವಿಶ್ವವಿದ್ಯಾಲಯಗಳ ಸೇವೆಗೆ ಸೇರಲು ಇಚ್ಛಿಸುವ ಮಾತೃ ವಿಶ್ವವಿದ್ಯಾಲಯಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಂದ ಸಂಬಂಧಪಟ್ಟ ಆಯಾ ಮಾತೃ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ) ಇವರು ನಿಯಮಾನುಸಾರ ಅಭಿಮತ ಪಡೆದು ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.
11. ಈ ನೂತನ 07 ವಿಶ್ವವಿದ್ಯಾಲಯಗಳಿಗೆ ಆಯವ್ಯಯದಲ್ಲಿ ಮಂಜೂರಾಗಿರುವ ರೂ. 2 ಕೋಟಿ ಮೊತ್ತವನ್ನು ಕ್ರಮ ಸಂಖ್ಯೆ 10 ರಂತೆ ಕ್ರಮ ವಹಿಸಿ ಸರ್ಕಾರದಿಂದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವಿಲೀನಾತಿ ಆದೇಶವನ್ನು ಹೊರಡಿಸಿದ ನಂತರ ಬಿಡುಗಡೆಗೊಳಿಸಲಾಗುವುದು.
12. ನೂತನ 07 ವಿಶ್ವವಿದ್ಯಾಲಯಗಳ ಸ್ನಾತಕೋತ್ತರ ಕೇಂದ್ರಗಳಿಗೆ ಸಂಬಂಧಪಟ್ಟ ಜಮೀನು, ಕಟ್ಟಡ, ಪೀಠೋಪಕರಣ ಮತ್ತು ಸಾಮಗ್ರಿಗಳನ್ನು ಪ್ರಸ್ತುತ ಹೇಗಿದೆಯೋ ಹಾಗೇ ಎಲ್ಲ ದಾಖಲೆಗಳೊಂದಿಗೆ ಸಂಬಂಧಪಟ್ಟ ಆಯಾ ಮಾತೃ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ) ಇವರು ನಿಯಮಾನುಸಾರ ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆದು ಈ ಆದೇಶ ಹೊರಡಿಸಿದ ದಿನಾಂಕದಿಂದ ಒಂದು ತಿಂಗಳೊಳಗಾಗಿ ವರ್ಗಾಯಿಸಲು ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳತಕ್ಕದ್ದು.

...4

Scanned with CamScanner

ನೂತನ 07 ವಿಶ್ವವಿದ್ಯಾಲಯಗಳಿಗೆ ಮಾತೃ ವಿಶ್ವವಿದ್ಯಾಲಯಗಳಿಂದ ವರ್ಗಾವಣೆ ಆಗಬೇಕಾಗಿರುವ ಜಮೀನಿನ ದಾಖಲೆಗಳನ್ನು ಒಂದು ತಿಂಗಳೊಳಗಾಗಿ ಮಾತೃ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ), ಇವರು ವರ್ಗಾಯಿಸತಕ್ಕದ್ದು. ಹಾಗೂ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ಜಮೀನಿನ ವರ್ಗಾವಣೆಗೆ ಸಂಬಂಧಿಸಿದಂತೆ ಅಗತ್ಯ ಸಹಕಾರ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Sheetal M Hiremath

**(ಶೀತಲ್ ಎಂ. ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-1)

**ಇವರಿಗೆ:**

1) ಮಹಾಲೇಖಪಾಲರು (ಲೆಕ್ಕಪತ್ರ) / (ಆಡಿಟ್), ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು
4) ಮಾನ್ಯ ಮುಖ್ಯ ಮಂತ್ರಿಯವರ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
5) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು
6) ಉಪಾಧ್ಯಾಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
7) ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು
8) ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ) / (ಮೌಲ್ಯಮಾಪನ) : ಹಣಕಾಸು ಅಧಿಕಾರಿಗಳು
9) ಸಂಬಂಧಪಟ್ಟ ತಾಲ್ಲೂಕುಗಳ ತಹಶೀಲ್ದಾರುಗಳು
10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ

**ಪ್ರತಿ**

1) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ) – ಇವರ ಆಪ್ತ ಸಹಾಯಕರು
4) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಮತ್ತು ಯೋಜನೆ)– ಇವರ ಆಪ್ತ ಸಹಾಯಕರು
5) ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ – ಇವರ ಆಪ್ತ ಸಹಾಯಕರು
6) ಇ-ಸಂಯೋಜಕರು, ಉನ್ನತ ಶಿಕ್ಷಣ ಇಲಾಖೆ

Scanned with CamScanner